Karnatak Law Society's
**Vishwanathrao Deshpande Institute of Technology**
(Approved by AICTE, New Delhi. Affiliated to VTU, Belagavi)
(Recognised Under Section 2(f) by UGC, New Delhi)
Udyog Vidya Nagar, Haliyal – 581329, Dist: Uttar Kannada (Karnataka)
Phone: 08284-220861, 220334, 221409, Fax: 08284-220813
www.klsvdit.edu.in principal@klsvdit.edu.in

Date: 02-06-2022

**ಪತ್ರಿಕಾ ಪ್ರಕಟಣೆ**

## ಉಚಿತ ಸಿ.ಇ.ಟಿ ತರಬೇತಿ: 150 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗಿ

ಕೆ.ಎಲ್.ಎಸ್ ವಿ.ಡಿ.ಐ.ಟಿ ಹಳಿಯಾಳದಲ್ಲಿ ಆಯೋಜಿಸಿರುವ ನಾಲ್ಕು ದಿನಗಳ ಉಚಿತ ಸಿ.ಇ.ಟಿ ತರಬೇತಿ ಶಿಬಿರ ಜೂನ್ 2 ರಂದು ಉದ್ಘಾಟನೆಗೊಂಡಿತು.

ಮಹಾವಿದ್ಯಾಲಯದ ಪ್ರಾಶುಪಾಲರಾದ ಡಾ. ವಿ. ಎ. ಕುಲಕರ್ಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ಪಿ.ಯು.ಸಿ ತರಗತಿ ಶೈಕ್ಷಣಿಕ ಭವಿಷ್ಯದ ನಿರ್ಣಾಯಕ ಘಟ್ಟವಾಗಿದ್ದು ಈ ಹಂತದಲ್ಲಿ ವಿದ್ಯಾರ್ಥಿಗಳು ಉತ್ತಮ ಕ್ಷೇತ್ರ ಆಯ್ಕೆ ಮಾಡಿಕೊಂಡು ಮುಂದುವರಿಯಬೇಕು ಎಂದು ಕರೆ ನೀಡಿದರು ಹಾಗೂ ದ್ವಿತೀಯ ಪಿ.ಯು.ಸಿ ನಂತರ ಲಭ್ಯವಿರುವ ಅವಕಾಶಗಳ ಕುರಿತು ಮಾಹಿತಿ ನೀಡಿದರು. ಬೆಳಗಾವಿಯ ವಿವಾಸಾ ಅಕಾಡೆಮಿಯ ವಿಷಯ ತಜ್ಞರಾದ ಪ್ರೊ. ವಿವೇಕಾನಂದ ಖೋತ್ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ಪ್ರೊ. ಎಸ್. ಡಿ. ಕುಲಕರ್ಣಿ ನಿರೂಪಿಸಿದರು. ಡಾ. ಆರ್. ಎಸ್ ಮುನ್ನೊಳ್ಳಿ, ಡಾ. ಸಮೀರ ಗಲಗಲಿ, ಡಾ. ವಿನೋದ ನಾಯ್ಕ್ ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ವಿಜಯಪುರ, ಬಾಗಲಕೋಟ, ಹುಬ್ಬಳ್ಳಿ, ಧಾರವಾಡ, ಶಿರಸಿ, ಸಿದ್ದಾಪುರ, ಯಲ್ಲಾಪುರ, ದಾಂಡೇಲಿ, ಅಳ್ನಾವರ ಮತ್ತು ಸ್ಥಳೀಯ ಭಾಗದ 150 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ತರಬೇತಿ ಶಿಬಿರದಲ್ಲಿ ಭಾಗವಹಿಸಿದ್ದಾರೆ ಹಾಗೂ ಅಭ್ಯರ್ಥಿಗಳಿಗೆ ಊಟ ಮತ್ತು ವಸತಿ ವ್ಯವಸ್ಥೆಯನ್ನು ಉಚಿತವಾಗಿ ನೀಡಲಾಗುತ್ತಿದೆ.

ಪ್ರಾಂಶುಪಾಲರು


KLSVDIT
CRASH COURSE FOR


KLSVDIT